# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | (1585) 1393 |
| ಸದಸ್ಯರ ಹೆಸರು | : | ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 19-12-2025 |
| ಉತ್ತರಿಸುವ ಸಚಿವರು | : | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬಳ್ಳಾರಿಯಲ್ಲಿ ನಡೆಸಲು ಉದ್ದೇಶಿಸಿದ್ದ 88ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸರ್ವಾಧ್ಯಕ್ಷರಾಗಿ ಹಿರಿಯ ಲೇಖಕಿ, ಬುಕರ್ ಪ್ರಶಸ್ತಿ ವಿಜೇತೆ ಬಾನು ಮುಷ್ತಾಕ್ ಅವರ ಹೆಸರನ್ನು ಅಂತಿಮಗೊಳಿಸಿ 2025ರ ಡಿಸೆಂಬರ್ ಮಾಹೆಯಲ್ಲಿ ಸಮ್ಮೇಳನ ನಡೆಸುವುದಾಗಿ ಘೋಷಿಸಲಾಗಿದ್ದು ಸಮ್ಮೇಳನ ನಡೆಯದಿರುವುದಕ್ಕೆ ಕಾರಣ ಗಳೇನು: | ಕನ್ನಡ ಸಾಹಿತ್ಯ ಪರಿಷತ್ತಿನ ಇತ್ತೀಚಿನ ವಿದ್ಯಮಾನಗಳ ಹಿನ್ನೆಲೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿದ್ದ ಶ್ರೀ ಮಹೇಶ್ ಜೋಷಿ ಅವರ ಮೇಲಿನ ಆರೋಪಗಳ ಕುರಿತಾಗಿ ಸಹಕಾರ ಇಲಾಖೆಯಿಂದ ವಿಚಾರಣೆ ನಡೆಸಲಾಗುತ್ತಿದ್ದು ಹಾಗೂ ಗೌರವಾನ್ವಿತ ಉಚ್ಚ ನ್ಯಾಯಾಲಯದಲ್ಲಿ ಮೊಕದ್ದಮೆ ದಾಖಲಾಗಿರುತ್ತದೆ.<br><br>ಈ ಹಿನ್ನೆಲೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು ಘೋಷಣೆ ಮಾಡಿದ್ದ 88ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಪೂರ್ವಭಾವಿ ಸಿದ್ಧತಾ ಕಾರ್ಯಗಳನ್ನು ಕೈಗೊಳ್ಳದಿರುವುದರಿಂದ ಡಿಸೆಂಬರ್ ತಿಂಗಳಿನಲ್ಲಿ 88ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ನಡೆಸಲಾಗಿರುವುದಿಲ್ಲ. |
| ಆ) | ಹಾಗಿದ್ದಲ್ಲಿ, ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಯಾವ ಮಾಹೆಯಲ್ಲಿ ನಡೆಸಲು ಉದ್ದೇಶಿಸಲಾಗಿದೆ: ಸಮ್ಮೇಳನ ಆಯೋಜನೆ ನಿಟ್ಟಿನಲ್ಲಿ ನಡೆದಿರುವ ಸಿದ್ಧತೆಗಳೇನು: (ವಿವರವಾದ ಮಾಹಿತಿ ನೀಡುವುದು) | |
| ಇ) | ಈ ಸಮ್ಮೇಳನಕ್ಕೆ ಸರ್ಕಾರ ಎಷ್ಟು ಅನುದಾನ ಒದಗಿಸಲಿದೆ; ಈಗಾಗಲೇ ಅನುದಾನ ಬಿಡುಗಡೆ ಮಾಡದ್ದಲ್ಲಿ ಮಾಹಿತಿ ನೀಡುವುದು. | ಬಳ್ಳಾರಿಯಲ್ಲಿ ನಡೆಸಲು ಉದ್ದೇಶಿಸಿರುವ 88ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ 2025-26ನೇ ಸಾಲಿನ ಕ್ರಿಯಾಯೋಜನೆಯಲ್ಲಿ ರೂ.10.00 ಕೋಟಿಗಳ ಅನುದಾನವನ್ನು ಮೀಸಲಿರಿಸಲಾಗಿದೆ.<br><br>ಬಳ್ಳಾರಿ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ವಿವಿಧ ಸಮಿತಿಗಳು ರಚನೆಯಾದ ನಂತರ ಸಮಿತಿಗಳು ನೀಡುವ ಒಟ್ಟಾರೆ ಪ್ರಸ್ತಾವನೆ ಮತ್ತು ಅಂದಾಜು ವೆಚ್ಚಗಳನ್ನು ಗಮನಿಸಿ ಬಳ್ಳಾರಿ ಜಿಲ್ಲಾಡಳಿತವು ಸಲ್ಲಿಸುವ ಪ್ರಸ್ತಾವನೆಯನ್ನು ನಿಯಮಾನುಸಾರ ಪರಿಶೀಲಿಸಲಾಗುವುದು. |
| ಈ) | ಮೂರನೇ ವಿಶ್ವ ಕನ್ನಡ ಸಮ್ಮೇಳನವನ್ನು ನಡೆಸಲು ಸರ್ಕಾರ ಉದ್ದೇಶಿಸಿದೆಯೇ? | ಮೂರನೇ ವಿಶ್ವ ಕನ್ನಡ ಸಮ್ಮೇಳನ ನಡೆಸುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ. |

ಸಂಖ್ಯೆ: ಕಸಂವಾ 120 ಕವಿಸ 2025

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.